**ಕರ್ನಾಟಕ ಸರ್ಕಾರ**

ಸಂಖ್ಯೆ:ಗ್ರಾಅಪ:86:ಆರ್‌ಆರ್‌ಸಿ:15

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:26-7-2016

**ಸುತ್ತೋಲೆ**

ವಿಷಯ: ನಿಯಮಬಾಹಿರವಾಗಿ ತುಂಡು ಗುತ್ತಿಗೆ ಆಧಾರದ ಮೇಲೆ ಕಾಮಗಾರಿಗಳನ್ನು ನಿರ್ವಹಿಸುವ ಅಧಿಕಾರಿಗಳನ್ನು ಹೊಣೆಗಾರರನ್ನಾಗಿಸಿ ಶಿಸ್ತು ಕ್ರಮಕ್ಕೆ ಒಳಪಡಿಸುವಂತೆ ಸಾರ್ವಜನಿಕ ಲೆಕ್ಕ ಪತ್ರ ಸಮಿತಿಯು ಅಭಿಪ್ರಾಯ ನೀಡಿರುವುದರಿಂದ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಲು ಸೂಚನೆಗಳು.

ಉಲ್ಲೇಖ:
1. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ:140/4:ಆರ್‌ಆರ್‌ಆರ್‌ಸಿ:13, ದಿನಾಂಕ:28-9-2013
2. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ:86:ಆರ್‌ಆರ್‌ಸಿ:15 ದಿನಾಂಕ:27-6-2016
3. ಮುಇಂ/ಸುತ್ತೋಲೆ ಸಂ: /2016-17 ದಿನಾಂಕ: 19-7-2016

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (3)ರಲ್ಲಿನ ಸುತ್ತೋಲೆಯನ್ನು ಹಿಂಪಡೆಯಲಾಗಿದ್ದು, ಉಲ್ಲೇಖ (1) ಮತ್ತು (2) ರಲ್ಲಿನ ಸುತ್ತೋಲೆಗಳಲ್ಲಿರುವಂತೆ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಸೂಚಿಸಿದೆ ಹಾಗೂ ಹೆಚ್ಚುವರಿಯಾಗಿ ಕೆಳಕಂಡ ನಿಬಂಧನೆಗಳನ್ನು ಪಾಲಿಸುವುದು.

1. ಇಲಾಖೆಯಡಿಯ ಕಾಮಗಾರಿಗಳನ್ನು ವಿಭಜಿಸಿ (ಒಟ್ಟು ಕಾಮಗಾರಿಯನ್ನು ರೂ.5.00 ಲಕ್ಷಕ್ಕಿಂತ ಕಡಿಮೆ ಇರುವಂತೆ ಮಾಡುವ ಉದ್ದೇಶದಿಂದ) ತುಂಡು ಗುತ್ತಿಗೆ ಆಧಾರದ ಮೇಲೆ ಕೈಗೊಳ್ಳುವಂತಿಲ್ಲ.
2. ಕೆ.ಟಿ.ಟಿ.ಪಿ ನಿಯಮಾವಳಿಗಳನ್ನು ತಪ್ಪದೇ ಪಾಲಿಸತಕ್ಕದ್ದು ಹಾಗೂ ಕಾಮಗಾರಿಗಳಲ್ಲಿ ನಿಗದಿತ ಗುಣಮಟ್ಟ ಕಾಯ್ದುಕೊಳ್ಳುವುದು
3. ನಿರ್ವಹಿಸಿದ ಎಲ್ಲಾ ಕಾಮಗಾರಿಗಳನ್ನು ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ತಪ್ಪದೆ ದಾಖಲಿಸುವುದು.
4. ಗುತ್ತಿಗೆ ಕರಾರು ಮಾಡಿಕೊಳ್ಳದೆ ಯಾವುದೇ ಕಾಮಗಾರಿಗಳನ್ನು ಪ್ರಾರಂಭಿಸಬಾರದು.

ಮೇಲಿನ ನಿಯಮಗಳನ್ನು ಉಲ್ಲಂಘನೆ ಮಾಡಿ ನಿಯಮ ಬಾಹಿರವಾಗಿ ಪ್ರಸ್ತಾವನೆ ಸಲ್ಲಿಸುವ / ದೊಡ್ಡ ಮೊತ್ತದ ಕಾಮಗಾರಿಗಳನ್ನು ಅನಗತ್ಯವಾಗಿ ತುಂಡು ಮಾಡಿ ಕಾಮಗಾರಿಗಳನ್ನು ಅನುಮೋದಿಸುವ ನಿರ್ವಹಿಸಲು ಆದೇಶಿಸುವ ಅಧಿಕಾರಿಗಳನ್ನು ನೇರವಾಗಿ ಹೊಣೆಗಾರರನ್ನಾಗಿಸಿ ಕೆ.ಸಿ.ಎಸ್.ಆರ್. ನಿಮಾವಳಿ 1957ರನ್ವಯ ಶಿಸ್ತು ಕ್ರಮಕ್ಕೆ ಒಳಪಡಿಸಲಾಗುವುದು.

(ಬೂವನಹಳ್ಳಿ ನಾಗರಾಜ್) 26/7/16
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ

2. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಬೆಂಗಳೂರು-9
3. ಮುಖ್ಯ ಇಂಜಿನಿಯರ್, ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು-9
4. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕೆಆರ್ಆರ್‌ಡಿಎ ಸಂಸ್ಥೆ, ಬೆಂಗಳೂರು-9
5. ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತಗಳ ಅಧೀಕ್ಷಕ ಇಂಜಿನಿಯರ್‌ಗಳು,
6. ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಕಾರ್ಯಪಾಲಕ ಇಂಜಿನಿಯರ್‌ಗಳು
7. ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗಗಳ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳು.
8. ಎಲ್ಲಾ ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು

ಪ್ರತಿ ಮಾಹಿತಿಗಾಗಿ:

1. ಮಾನ್ಯ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಮಾನ್ಯ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ರವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
4. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ರವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿ ಕಟ್ಟಡ, ಬೆಂಗಳೂರು.
7. ಆಯುಕ್ತರು, ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
8. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
9. ಮಾಹಿತಿ ಕೇಂದ್ರದ ಗಣಕ ಕೋಶ ಮುಖ್ಯಸ್ಥರು, ಗ್ರಾಅಪಂರಾ ಇಲಾಖೆ ಇವರಿಗೆ ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಗ್ರೂಪ್ ಮೈಲ್ ನಲ್ಲಿ ರವಾನಿಸಲು ಸೂಚಿಸಿದೆ
10. ರಕ್ಷಾ ಕಡತ / ಹೆಚ್ಚುವರಿ ಪ್ರತಿ.